RNU AIR DHARWAD

# MARCH 22,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ವಿವಿಧ ಕನ್ನಡಪರ ಸಂಘಟನೆಗಳು, ಕರೆ ನೀಡಿದ ಅಖಿಲ ಕರ್ನಾಟಕ ಬಂದ್ ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬೆಳಗಾವಿಯಲ್ಲಿ ಕನ್ನಡಿಗರ ಮೇಲಿನ ದೌರ್ಜನ್ಯ ಖಂಡಿಸಿ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕನ್ನಡ ಪರ ಸಂಘಟನೆಗಳು ರಾಜ್ಯದ ವಿವಿಧೆಡೆಗಳ ನಗರಗಳಲ್ಲಿ ಪ್ರತಿಭಟನೆ ನಡೆಸಿದವು. ಮೈಸೂರಿನಲ್ಲಿ ಇಂದು ಮುಂಜಾನೆ, ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರು ನಗರದ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ನೆರೆದು, ಪ್ರತಿಭಟನೆ ನಡೆಸಿ ಘೋಷಣೆಗಳನ್ನು ಕೂಗಿದರು. ಸಾರಿಗೆ ಸಂಚಾರ ಅಸ್ತವ್ಯಸ್ತಗೊಂಡ ಹಿನ್ನೆಲೆಯಲ್ಲಿ, ಪೊಲೀಸರು ಪ್ರತಿಭಟನಾಕಾರರನ್ನು ತಡೆದು, ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಮೈಸೂರು ನಗರದಲ್ಲಿ ಸದ್ಯ ಅಂಗಡಿ ಮುಂಗಟ್ಟುಗಳು ತೆರೆದಿದ್ದು, ಸಾರಿಗೆ ಸೇವೆಗಳು ಎಂದಿನಂತೆ ಮುಂದುವರಿದಿವೆ.

<><><>

ಬಳ್ಳಾರಿಯಲ್ಲಿ ಪ್ರತಿಭಟನೆ ನಡೆಸಿದ ಕನ್ನಡ ಪರ ಸಂಘಟನೆ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ, ವಿವಿಧ ಬೇಡಿಕೆಗಳ ಮನವಿಯನ್ನು ಜಿಲ್ಲಾಧಿಕಾರಿಗೆ ಸಲ್ಲಿಸಿದರು.

<><><>

ಚಿತ್ರದುರ್ಗ ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಕನ್ನಡಪರ ಸಂಘಟನೆಗಳು ನೀಡಿದ ಬಂದ್ ಕರೆಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಜಿಲ್ಲೆಯಲ್ಲಿ ಸಾರಿಗೆ ಸಂಚಾರ ಸೇವೆ ಎಂದಿನಂತಿದ್ದು, ಅಂಗಡಿ ಮುಂಗಟ್ಟುಗಳು ತೆರೆದಿವೆ.

<><><>

ಇಂದು ವಿಶ್ವ ಜಲ ದಿನ. ಆಧುನಿಕ ಕಾಲಘಟ್ಟದಲ್ಲಿ ಜೀವಜಲ ನೀರಿನ ಸಂರಕ್ಷಣೆಗಾಗಿ, ವ್ಯವಸ್ಥಿತ ಕಂಠಹಾರ ಕೆರೆ ನಿರ್ಮಾಣ ಮಾಡುವ ಮೂಲಕ ಮಾದರಿಯಾಗಿದ್ದಾರೆ ಧಾರವಾಡದ ನೇಚರ್ ಫಸ್ಟ್ ಇಕೋ ವಿಲ್ಲೇಜ್ ನ ಕಾರ್ಯನಿರ್ವಾಹಕ ಅಧಿಕಾರಿ ಪಂಚಾಕ್ಷರಿ ಹಿರೇಮಠ ಅವರು. ಕಂಠಹಾರ ಕೆರೆ ನಿರ್ಮಾಣದ ಮೂಲಕ ಧಾರವಾಡ ಸಮೀಪದ ಹಳ್ಳಿಗೇರಿ ಗ್ರಾಮದಲ್ಲಿ ಅಂತರ್ಜಲ ಮಟ್ಟ ದ್ವಿಗುಣಗೊಂಡ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಅವರು ಮಾಹಿತಿ ನೀಡಿದ್ದಾರೆ...

<><><>

ಬೈಟ್: ಪಂಚಾಕ್ಷರಿ ಹಿರೇಮಠ 37 ಸೆಕೆಂದುಗಳು

<><><>

ಸೇನಾ ನೇಮಕಾತಿ ಕಚೇರಿ ಬೆಂಗಳೂರು ಹಾಗೂ ಬೆಳಗಾವಿ ವಲಯದಿಂದ ಭೂಸೇನೆಯಲ್ಲಿ ಅಗ್ನಿವೀರ ನೇಮಕಾತಿಗೆ ಆನ್‌ಲೈನ್ ನೋಂದಣಿ ಪ್ರಕ್ರಿಯೆ ಆರಂಭಗೊಂಡಿದೆ. ಬೆಳಗಾವಿ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಅಭ್ಯರ್ಥಿಗಳು ನೋಂದಣಿ ಮಾಡಿಸಬಹುದು. ಅಗ್ನಿವೀರ್ ಜನರಲ್ ಡ್ಯೂಟಿ, ಅಗ್ನಿವೀರ್ ಟೆಕ್ನಿಕಲ್, ಅಗ್ನಿವೀರ್ ಟ್ರೇಡ್‌ಮನ್ ಹುದ್ದೆಗಳಿಗೆ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. ಸೇವೆಗೆ ಸೇರಲು ಬಯಸುವ ಅರ್ಹ ಅಭ್ಯರ್ಥಿಗಳು, ಏಪ್ರಿಲ್ 10ರೊಳಗೆ www.joinindianarmy.nic.in ವೆಬ್‌ಸೈಟಿನಲ್ಲಿ ನೋಂದಣಿ ಮಾಡಿಸಿಕೊಳ್ಳಬಹುದು ಎಂದು ನೇಮಕಾತಿ ವಿಭಾಗದ ಕರ್ನಲ್ ಎ.ಕೆ. ಉಪಾಧ್ಯಾಯ ತಿಳಿಸಿದ್ದಾರೆ.

<><><>

ಧಾರವಾಡ ಕೇಂದ್ರ ಕಾರಾಗೃಹದಲ್ಲಿ, ಸಾಧನಾ ಸಂಸ್ಥೆ ಹಾಗೂ ಪ್ರಿಜನ್ ಮಿನಿಸ್ಟರಿ ಆಫ್ ಇಂಡಿಯಾ ಸಹಯೋಗದಲ್ಲಿ ಇತ್ತೀಚೆಗೆ, ಕಾರಾಗೃಹದ ಮಹಿಳಾ ವಿಭಾಗದಲ್ಲಿರುವ ಮಹಿಳಾ ಬಂದಿಗಳಿಗಾಗಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

<><><>

ಇಂದು, ಗದಗದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಕಾಯಕರತ್ನ ಶ್ರೀ ಮೈಲಾರೆಪ್ಪ ಮೆಣಸಗಿ ದತ್ತಿ ಉಪನ್ಯಾಸ ಆಯೋಜಿತವಾಗಿದೆ. ಸಂಜೆ 6 ಗಂಟೆ 30 ನಿಮಿಷಕ್ಕೆ ಆರಂಭಗೊಳ್ಳುವ ಕಾರ್ಯಕ್ರಮದಲ್ಲಿ, ಓಂಕಾರಗಿರಿ ಶ್ರೀ ಫಕಿರೇಶ್ವರ ಶಿವಾಚಾರ್ಯ ಸ್ವಾಮಿಯವರು ಸಾನಿಧ್ಯ ವಹಿಸಲಿದ್ದಾರೆ. ಅಹಲ್ಯಾಬಾಯಿ ಹೋಳ್ಕರ ಜೀವನ ಮತ್ತು ಸಾಧನೆ ಕುರಿತು ಉಪನ್ಯಾಸ ನಡೆಯಲಿದೆ.

<><><>

ಬೆಂಗಳೂರಿನ ಚನ್ನೇನಹಳ್ಳಿಯ ಜನಸೇವಾ ವಿದ್ಯಾ ಕೇಂದ್ರದಲ್ಲಿ, ರಾಷ್ಟ್ರೀಯ ಸ್ವಯಂಸೇವಕ ಸಂಘದ, ಮೂರು ದಿನಗಳ, ಅಖಿಲ ಭಾರತೀಯ ಪ್ರತಿನಿಧಿ ಸಭಾ ಆರಂಭವಾಗಿದೆ. ಆರ್.ಎಸ್.ಎಸ್. ಸರಸಂಘ ಚಾಲಕ ಮೋಹನ್ ಭಾಗವತ್ ಮತ್ತು ಸರಕಾರ್ಯವಾಹ ದತ್ತಾತ್ರೇಯ ಹೊಸಬಾಳೆ, ಸಭೆಗೆ ಚಾಲನೆ ನೀಡಿದರು. ಈ ಬಾರಿಯ ವಿಜಯ ದಶಮಿಯಂದು, ಆರ್.ಎಸ್.ಎಸ್. ಸ್ಥಾಪನೆಗೊಂಡು, ನೂರು ವ ´ಗಳು ಪೂರ್ಣಗೊಳ್ಳಲಿವೆ. ಶತಮಾನೋತ್ಸವವನ್ನು ಸ್ಮರಣೀಯವಾಗಿಸಲು ಮತ್ತು ಒಟ್ಟು ಆಚರಣೆಯ ಸ್ವರೂಪದ ಕುರಿತು, ಇಂದು ಚಿಂತನೆ ನಡೆಯಲಿದೆ.

<><><>

ಆಕಾಶವಾಣಿಯ ಬಹುಶ್ರುತ ಕಾರ್ಯಕ್ರಮ, 'ಮನ್ ಕಿ ಬಾತ್' ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 30, ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯನ್ನುದ್ದೇಶಿಸಿ, ಮಾತನಾಡಲಿದ್ದಾರೆ. ಇದು ಮನದ ಮಾತಿನ 120ನೇ ಸಂಚಿಕೆಯಾಗಿದೆ. ಸಾರ್ವಜನಿಕರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು, "ಮೈ ಜಿ.ಓ.ವಿ. ಓಪನ್ ಫೋರ್ಂ", "ನಮೋ ಆ್ಯಪ್"" ಅಥವಾ ಉಚಿತ ಸಹಾಯವಾಣಿ ಸಂಖ್ಯೆ 1800–11–7800 ಮೂಲಕ ಹಂಚಿಕೊಳ್ಳಬಹುದು

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>